## ಸಿವಿಲ್ ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹಗರಿಬೊಮ್ಮನಹಳ್ಳಿ

ಸಿ ಸಿ ನಂ. 925/2024

ಸಾಕ್ಷಿಗೆ ದಿನಾಂಕ 18-09-2025 ರಂದು ಪ್ರಮಾಣ ವಚನ ಭೋದಿಸಲಾಯಿತು.

C.W.: 3 P.W.: 2

| | | |
|---|---|---|
| ಹೆಸರು | ಃ | ಕೊಟ್ರೇಶ |
| ತಂದೆಯ ಹೆಸರು | ಃ | ಹನುಮಂತಪ್ಪ |
| ವಯಸ್ಸು | ಃ | 30 ವರ್ಷ |
| ಉದ್ಯೋಗ | ಃ | ಪೇಂಟರ್ |
| ವಾಸ ಸ್ಥಳ | ಃ | ಕಣವಿನಾಯಕನಹಳ್ಳಿ ಗ್ರಾಮ |

ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-

ಸನ್ 2024 ರಲ್ಲಿ ನಾನು ಪೈನಾನ್ಸ ಕೆಲಸದ ಕುರಿತು ವೆರಿಫಿಕೇಶನ್ ಗಾಗಿ ಕೂಡ್ಲಿಗಿ ಪೋಲೀಸ್ ಠಾಣೆಗೆ ಹೋಗಿದ್ದೆ. ಠಾಣೆಯಲ್ಲಿ ಒಂದು ಚೀಲ ಇತ್ತು ಅದರಲ್ಲಿ ಏನಿತ್ತು ಎಂದು ನನಗೆ ಗೊತ್ತಿಲ್ಲ. ಪೋಲೀಸರು ಆ ಚೀಲ ತೋರಿಸಿ ಒಂದು ದಾಖಲೆಗೆ ನನ್ನ ಸಹಿಯನ್ನು ಪಡೆದರು. ಸದರಿ ದಾಖಲೆಯಲ್ಲಿ ಏನು ಬರೆದಿತ್ತು ಎನ್ನುವ ವಿಚಾರ ನನಗೆ ಗೊತ್ತಿಲ್ಲ, ಸಾಕ್ಷಿಗೆ ನಿಪಿ-1 ಪಂಚನಾಮೆ ತೋರಿಸಲಾಗಿ ಸಾಕ್ಷಿಯು ಅದರಲ್ಲಿ ತನ್ನ ಸಹಿ ಇದೆ ಅಂತಾ ನೋಡಿ ಗುರುತಿಸಿದ್ದು ಸದರಿ ಸಹಿಯನ್ನು ನಿಪಿ-1ಬಿ ಎಂದು ಗುರುತಿಸಲಾಯಿತು. ನನ್ನ ಸಮಕ್ಷಮ ಪೋಲೀಸರು ಯಾವುದೇ ಪಂಚನಾಮೆ ಜರುಗಿಸಿಲ್ಲ, ಯಾವುದೇ ವ್ಯಕ್ತಿಯನ್ನು ದಸ್ತಗಿರಿ ಮಾಡಿಲ್ಲ, ಅವನಿಂದ ಯಾವುದೇ ಮು ಮಾಲು ಅಮಾನತ್ತುಪಡಿಸಿಕೊಂಡಿಲ್ಲ ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲಲ. ಸಾಕ್ಷಿಗೆ ಮು ಮಾ-5 ರ ಮೇಲೆ ಅಂಟಿಸಿರುವ ಚೀಟಿ ತೋರಿಸಲಾಗಿ ಸಾಕ್ಷಿಯು ಅದರಲ್ಲಿ ತನ್ನ ಸಹಿ ಇದೆ ಸದರಿ ಸಹಿಯನ್ನು ನಾನು ಪೋಲೀಸ್ ಠಾಣೆಯಲ್ಲಿ ಮಾಡಿದ್ದೇನೆ ಎನ್ನುತ್ತಾರೆ.

(ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲು ಕೇಳಿಕೊಂಡಿದ್ದು ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಸ. ಸ. ಅಭಿಯೋಜಕರವರಿಂದಃ-

ದಿಃ 25-03-2024 ರಂದು ಮದ್ಯಾಹ್ನ 3.35 ರಿಂದ 4.20 ಗಂಟೆಯವರೆಗೆ ಪೋಲೀಸರು ಘಟನಾ ಸ್ಥಳದಲ್ಲಿ ನಿಪಿ-1 ರಂತೆ ಪಂಚನಾಮೆಯನ್ನು ಜರುಗಿಸಿ ನನ್ನ ಮತ್ತು ಚಾಸಾ-2 ರವರ ಸಮ್ಮುಖದಲ್ಲಿ ಮು ಮಾ-1 ರಿಂದ 5 ನ್ನು ಆರೋಪಿತನಿಂದ ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಘಟನಾ ಸ್ಥಳದಲ್ಲಿ ನಾನು ನಿಪಿ-1 ರಲ್ಲಿರುವ

ವಿಚಾರ ತಿಳಿದುಕೊಂಡು ಸದರಿ ದಾಖಲೆಗೆ ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು. ಆರೋಪಿ ಪರ ವಕೀಲರಿಂದಃ-ಇಲ್ಲ

ಮರು ವಿಚಾರಣೆ ಇಲ್ಲಃ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ,

ಸಿವಿಲ್ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ